# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 673 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:17-01-2020

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

**ಇವರಿಗೆ:**

ಎಲ್ಲಾ ಜಿಲ್ಲಾ ಪಂಚಾಯತಿಯ,
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,

ಮಾನ್ಯರೆ,

**ವಿಷಯ:** ಫಿಟ್ ಇಂಡಿಯಾ ಅಭಿಯಾನ ಕಾರ್ಯಕ್ರಮದ ಅಂಗವಾಗಿ ಸೈಕಲ್ ಜಾಥಾ ನಡೆಸುವ ಬಗ್ಗೆ.

**ಉಲ್ಲೇಖ:**

1. ಸರ್ಕಾರದ ಇದೇ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ:26-08-2019 ಮತ್ತು 19-09-2019.
2. ಭಾರತ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಅರೆ ಸರ್ಕಾರಿ ಪತ್ರ ಸಂಖ್ಯೆ:ಎಎಸ್(ಆರ್‌ಡಿ)/ಫಿಟ್ ಇಂಡಿಯಾ/2020 ದಿನಾಂಕ:10-1-2020.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಸರ್ಕಾರದ ಸುತ್ತೋಲೆಗಳಲ್ಲಿ "ಫಿಟ್ ಇಂಡಿಯಾ" ಅಭಿಯಾನವು ದೇಶದ ಎಲ್ಲಾ ನಾಗರಿಕರು ಉತ್ತಮ ಆರೋಗ್ಯ, ದೇಹದಾರ್ಢ್ಯತೆ, ಪೌಷ್ಠಿಕತೆ ಕಾಪಾಡಿಕೊಳ್ಳುವ ಉದ್ದೇಶ ಹೊಂದಿರುತ್ತದೆ. ಅಲ್ಲದೆ ಸಕಾರಾತ್ಮಕ ಮನೋಭಾವದ ಮೂಲಕ ಉತ್ತಮ ಜೀವನಶೈಲಿ ರೂಢಿಸಿಕೊಳ್ಳುವ ಬಗ್ಗೆ ಅರಿವು ಹೆಚ್ಚಿಸುವ ಉದ್ದೇಶ ಹೊಂದಿರುವುದರಿಂದ ಸದರಿ ಅಭಿಯಾನವನ್ನು ಹಮ್ಮಿಕೊಳ್ಳುವುದರ ಬಗ್ಗೆ ಕ್ರಮ ಕೈಗೊಳ್ಳುವಂತೆ ಎಲ್ಲಾ ಜಿಲ್ಲಾ ಪಂಚಾಯತಿ / ತಾಲ್ಲೂಕು ಪಂಚಾಯತಿ / ಗ್ರಾಮ ಪಂಚಾಯತಿಗಳಿಗೆ ಸೂಚಿಸಲಾಗಿದೆ.

ಭಾರತ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಕಾರ್ಯದರ್ಶಿಯವರು ದಿನಾಂಕ:14-01-2020 ರಂದು ನಡೆದ ವಿಡಿಯೋ ಸಂವಾದದಲ್ಲಿ ದಿನಾಂಕ:18-01-2020 ರಂದು ಫಿಟ್ ಇಂಡಿಯಾ ಅಭಿಯಾನ ಕಾರ್ಯಕ್ರಮದ ಅಂಗವಾಗಿ ಗ್ರಾಮ ಪಂಚಾಯತಿ ಸದಸ್ಯರು ಮತ್ತು ಸ್ವ ಸಹಾಯ ಸಂಘಗಳ ಸದಸ್ಯರನ್ನೊಳಗೊಂಡಂತೆ ಗ್ರಾಮ ಪಂಚಾಯತಿ ಮಟ್ಟದಲ್ಲಿ ಸೈಕಲ್ ಜಾಥಾ ನಡೆಸುವ ಬಗ್ಗೆ ಕ್ರಮ ಕೈಗೊಳ್ಳುವಂತೆ ತಿಳಿಸಿರುತ್ತಾರೆ.

ಆದುದರಿಂದ ದಿನಾಂಕ:18-01-2020 ರಂದು ಫಿಟ್ ಇಂಡಿಯಾ ಅಭಿಯಾನ ಕಾರ್ಯಕ್ರಮದ ಅಂಗವಾಗಿ ಗ್ರಾಮ ಪಂಚಾಯತಿ ಸದಸ್ಯರು ಮತ್ತು ಸ್ವ ಸಹಾಯ ಸಂಘಗಳ ಸದಸ್ಯರನ್ನೊಳಗೊಂಡಂತೆ ಗ್ರಾಮ ಪಂಚಾಯತಿ ಮಟ್ಟದಲ್ಲಿ ಸೈಕಲ್ ಜಾಥಾ ನಡೆಸುವ ಬಗ್ಗೆ ಕ್ರಮ ಕೈಗೊಳ್ಳುವಂತೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

B. Naveenkumar 17/01/2020.
(ಬಿ. ನವೀನ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ.) (ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ: ಅಗತ್ಯ ಕ್ರಮಕ್ಕಾಗಿ**

1) ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು/ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.
3) ಸಂಪಾದಕರು, ಕರ್ನಾಟಕ ವಿಕಾಸ/ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

CS Scanned with CamScanner